PRAJAVANI, March 17, 2014, Page No. 04

### ಎಸ್‌ಎಸ್‌ಎಐ ನಿವೃತ್ತ ಪ್ರಧಾನ ಕಾರ್ಯದರ್ಶಿ ಸುಬ್ರಹ್ಮಣ್ಯ ಸಲಹೆ

# ಪಡಿತರ ವಿತರಣೆ ಸರ್ಕಾರವೇ ವಹಿಸಿಕೊಳ್ಳಲಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಪಡಿತರ ವಿತರಣೆಯನ್ನು ಖಾಸಗಿಯವರಿಗೆ ನೀಡದೆ, ಸಂಪೂರ್ಣ-ವಾಗಿ ಆಯಾ ರಾಜ್ಯ ಸರ್ಕಾರಗಳೇ ಜವಾಬ್ದಾರಿ ವಹಿಸಿಕೊಳ್ಳಬೇಕು. ಆಗ ಮಾತ್ರ ಪಡಿತರ ವಿತರಣೆಯಲ್ಲಿನ ಸೋರಿಕೆಯನ್ನು ತಡೆಯಬಹುದು' ಎಂದು ಭಾರತೀಯ ಸಾಮಾಜಿಕ ಭದ್ರತಾ ಸಂಘದ ನಿವೃತ್ತ ಪ್ರಧಾನ ಕಾರ್ಯದರ್ಶಿ ಆರ್‌ಕೆಪಿ ಸುಬ್ರಹ್ಮಣ್ಯ ಅಭಿಪ್ರಾಯಪಟ್ಟರು.

ಭಾರತೀಯ ಸಾಮಾಜಿಕ ಭದ್ರತಾ ಸಂಘವು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ (ಎಫ್‌ಕೆಸಿಸಿಐ) ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ 'ಸಾಮಾಜಿಕ ರಕ್ಷಣೆ ಮತ್ತು ಆಹಾರ ಭದ್ರತೆ' ಕುರಿತ ದುಂಡು ಮೇಜಿನ ಸಭೆಯಲ್ಲಿ ಅವರು ಮಾತನಾಡಿದರು.

'ಪಡಿತರ ವಿತರಣೆಯನ್ನು ಖಾಸಗಿ-ಯವರಿಗೆ ನೀಡಿರುವುದರಿಂದ ವಿತರ-ಕರು, ಮಾರಾಟಗಾರರು, ಸಾಗಾಟ-ಗಾರರು ಹೀಗೆ ನಾನಾ ಹಂತಗಳ ಮೂಲಕ ಫಲಾನುಭವಿಗಳಿಗೆ ತಲುಪು-ತ್ತದೆ. ಕೇಂದ್ರ ಸರ್ಕಾರ ಕಳೆದ ತಿಂಗಳು ನೇಮಿಸಿರುವ 'ಪಡಿತರ ಮೌಲ್ಯ-ಮಾಪಕರ' ತಂಡವು ಶೇ 57ರಷ್ಟು ಫಲಾನುಭವಿಗಳಿಗೆ ಪಡಿತರ ಸೌಲಭ್ಯವು ದೊರೆತಿಲ್ಲ ಎಂಬುದಾಗಿ ವರದಿ ಸಲ್ಲಿಸಿದೆ. ಆದ್ದರಿಂದ ಪಡಿತರ ವಿತರಣೆ ವ್ಯವಸ್ಥೆ (ಟಿಪಿಡಿಎಸ್)ಯನ್ನು ಆಯಾ ಸರ್ಕಾರ-ಗಳೇ ವಹಿಸಿಕೊಳ್ಳಲಿ' ಎಂದರು.

'ತಮಿಳುನಾಡು, ಕೇರಳ ಮತ್ತು ಛತ್ತೀಸಗಡ ರಾಜ್ಯಗಳಲ್ಲಿ ಪಡಿತರ ವಿತರಣೆಯನ್ನು ಖಾಸಗಿಯವರಿಗೆ ನೀಡದೆ ಸಹಕಾರಿ ಸಂಘಗಳು ಮತ್ತು ಸರ್ಕಾರಿ ಮಳಿಗೆಗಳ ಮೂಲಕವೇ ವಿತರಿಸಲಾಗುತ್ತಿದೆ. ಧಾನ್ಯಗಳ ಸರಬರಾಜಿಗೂ ಸರ್ಕಾರಿ ಸಾರಿಗೆಯನ್ನೇ ಬಳಸಲಾಗುತ್ತಿದೆ. ಹೀಗಾಗಿ ಅಲ್ಲಿ ಸೋರಿಕೆ ಪ್ರಮಾಣವಿಲ್ಲದೆ ಯೋಜನೆ ಯಶಸ್ವಿಯಾಗಿದೆ. ಅಂತಹ ವ್ಯವಸ್ಥೆಯನ್ನು ಕರ್ನಾಟಕದಲ್ಲೂ ಜಾರಿಗೆ ತರಬೇಕು' ಎಂದು ಹೇಳಿದರು.

ಭಾರತೀಯ ಸಾಮಾಜಿಕ ಭದ್ರತಾ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಎನ್.ಸೋಮ್, 'ರಾಷ್ಟ್ರೀಯ ಆಹಾರ ಭದ್ರತೆ ಹಕ್ಕು' ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಲು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲು ದುಂಡುಮೇಜಿನ ಸಭೆಯನ್ನು ಆಯೋಜಿಸಲಾಗಿದೆ' ಎಂದು ತಿಳಿಸಿದರು.




ಭಾರತೀಯ ಸಾಮಾಜಿಕ ಭದ್ರತಾ ಸಂಘವು (ಎಸ್‌ಎಸ್‌ಎಐ) ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ (ಎಫ್‌ಕೆಸಿಸಿಐ) ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ 'ಸಾಮಾಜಿಕ ರಕ್ಷಣೆ ಮತ್ತು ಆಹಾರ ಭದ್ರತೆ' ಕುರಿತ ದುಂಡು ಮೇಜಿನ ಸಭೆಯಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಬಿ.ಕೆ.ಭಟ್ಟಾಚಾರ್ಯ ಮಾತನಾಡಿದರು. ಭಾರತೀಯ ಸಾಮಾಜಿಕ ಭದ್ರತಾ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಎನ್.-ಸೋಮ್, ಜರ್ಮನಿಯ ಫ್ರೆಡ್ರಿಚ್ ಎಬರ್ಟ್ ಸ್ಟಿಫ್ಟ್ಂಗ್ ಕಂಪೆನಿಯ ಸಲಹೆಗಾರ ಪ್ರವೀಣ್ ಸಿನ್ಹಾ ಚಿತ್ರದಲ್ಲಿದ್ದಾರೆ —ಪ್ರಜಾವಾಣಿ ಚಿತ್ರ